**ಚಾಮುಂಡೇಶ್ವರಿ ವಿದ್ಯುತ್ ಸರಬರಾಜು**
**ನಿಗಮ ನಿಯಮಿತ**
**(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)**
ನಿಗಮ ಕಾರ್ಯಾಲಯ, ಚಾವಿಸನಿನಿ,
ಮೈಸೂರು-570017
Telephone No: 0821-2343384

**CHAMUNDESHWARI ELECTRICITY SUPPLY CORPORATION LIMITED**
*(A Government of Karnataka Undertaking)*
Corporate Office,CESC, Mysore-570017
**Web Site:** www.cescmysore.org.
**E-Mail**: gmhrd@cescmysore.org

Company Identity Number[CIN]:- **U40109KA2004SGC035177**

ಕ್ರಮಾಂಕ:ಚಾವಿಸನಿನಿ/ಆ ಮತ್ತು ಮಾ.ಸಂ./05/04/2022-23/ Cys-1391 ದಿನಾಂಕ: 14 DEC 2022
ಲಗತ್ತು: 2 ಹಾಳೆಗಳು.

**ಸುತ್ತೋಲೆ**

**ವಿಷಯ**: ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ.

**ಉಲ್ಲೇಖ**: 1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಟಿಪ್ಪಣಿ ಸಂಖ್ಯೆ: ಟಿಪ್ಪಣಿ ಸಂಖ್ಯೆ: ಮುಕಾ/502089/2022, ದಿನಾಂಕ:17.11.2022.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 240 ಸೇನೆನಿ 2022, ದಿನಾಂಕ:18.11.2022.
3. ನಿರ್ದೇಶಕರು(ಆ ಮತ್ತು ಮಾ.ಸಂ.), ಕವಿಪ್ರನಿನಿ., ಬೆಂಗಳೂರು ಇವರ ಸುತ್ತೋಲೆ ಪತ್ರ ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ: 23.11.2022.

********

ಚಾವಿಸನಿನಿಯಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಕೈಗೊಳ್ಳುವ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-1ರ ಟಿಪ್ಪಣಿ ಮತ್ತು ಉಲ್ಲೇಖ-2ರ ಸುತ್ತೋಲೆಯಲ್ಲಿ ಸರ್ಕಾರವು ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಕಟ್ಟುನಿಟ್ಟಾಗಿ ಪಾಲಿಸುವಂತೆ ಈ ಮೂಲಕ ಎಲ್ಲಾ ನೇಮಕಾತಿ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಸೂಚಿಸಲಾಗಿದೆ.

ಸರ್ಕಾರದ ಉಲ್ಲೇಖ-1ರ ಟಿಪ್ಪಣಿ ಮತ್ತು ಉಲ್ಲೇಖ-2ರ ಸುತ್ತೋಲೆಯ ಪ್ರತಿಯನ್ನು ಅನುಬಂಧ ಎಂದು ಲಗತ್ತಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ.)
ಚಾವಿಸನಿನಿ., ನಿಗಮ ಕಛೇರಿ, ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಹಾಸನ/ಮೈಸೂರು.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಕಂಪನಿ ಕಾರ್ಯದರ್ಶಿ, ನಿಗಮ ಕಛೇರಿ, ಚಾವಿಸನಿನಿ., ಮೈಸೂರು.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ.

- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ಮುಖ್ಯ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ಮುಖ್ಯ ಆರ್ಥಿಕ ಸಲಹೆಗಾರರುರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕ.

**<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ</u>**:-

- ಉಪಾಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ ರಿ(659), ಚಾವಿಸನಿನಿ., ಎಂ.ಪಿ.ಎಲ್ ಕಾಂಪೌಂಡ್, ಶ್ರೀ ಹರ್ಷ ರಸ್ತೆ, ಮೈಸೂರು.
- ಉಪಾಧ್ಯಕ್ಷರು, ಕವಿಮಂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಕಲ್ಯಾಣ ಸಂಸ್ಥೆ ರಿ(466), ಆಂತರಿಕ ಲೆಕ್ಕಪರಿಶೋಧನೆ ವಿಭಾಗೀಯ ಕಛೇರಿ, ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಹತ್ತಿರ, ಹಾಸನ.
- ಉಪಾಧ್ಯಕ್ಷರು, ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಎಂ.ಪಿ.ಎಲ್ ಕಾಂಪೌಂಡ್, ಶ್ರೀ ಹರ್ಷ ರಸ್ತೆ, ಮೈಸೂರು.
- ಉಪಾಧ್ಯಕ್ಷರು, ಕವಿಮಂ ಇಂಜಿನಿಯರ್ ಗಳ ಸಂಘ, ಕಡಕೊಳ, ಮೈಸೂರು.
- ಕಾರ್ಯದರ್ಶಿ, ಲೆಕ್ಕಾಧಿಕಾರಿಗಳ ಸಂಘ, ಚಾವಿಸನಿನಿ., ಎಂ.ಪಿ.ಎಲ್ ಕಾಂಪೌಂಡ್, ಶ್ರೀ ಹರ್ಷ ರಸ್ತೆ, ಮೈಸೂರು.

Annexure to Circular No: KPTCL/B16/5411/96-97 Dated 23.11.2022

ವಂದಿತಾ ಶರ್ಮಾ, ಭಾ.ಆ.ಸೇ.,
ಮುಖ್ಯ ಕಾರ್ಯದರ್ಶಿ
**VANDITA SHARMA**, I.A.S.,
Chief Secretary

ಕರ್ನಾಟಕ ಸರ್ಕಾರ
**Government of Karnataka**

ಸಂಖ್ಯೆ: ಮುಕಾ/5024891/2022 ದಿನಾಂಕ: 17.11.2022

## ಟಿಪ್ಪಣಿ

ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ:29:ಶಾಸನ:2022: ದಿ:23.10.2022ರ ಮೂಲಕ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಆಧ್ಯಾದೇಶ, 2022ನ್ನು ದಿನಾಂಕ:01.11.2022ರಿಂದ ಜಾರಿಗೊಳಿಸಲಾಗಿರುತ್ತದೆ.

ಇದರನ್ವಯ ರಾಜ್ಯಾಧೀನ ಸೇವೆಗಳಲ್ಲಿನ ನೇರ ನೇಮಕಾತಿ ಅಥವಾ ಪದೋನ್ನತಿಯಲ್ಲಿ ಅನುಸೂಚಿತ ಜಾತಿಗಳಿಗೆ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಹೆಚ್ಚಿಸಲಾಗಿರುವ ಮೀಸಲಾತಿಯನ್ನು ಜಾರಿಗೊಳಿಸಲು ರೋಸ್ಟರ್ ಬಿಂದುಗಳನ್ನು ಗುರುತಿಸುವ ಪ್ರಕ್ರಿಯೆಯು ಚಾಲನೆಯಲ್ಲಿದ್ದು, ಈ ಪ್ರಕ್ರಿಯೆಯು ಅಂತಿಮಗೊಂಡು ಅಧಿಕೃತವಾಗಿ ಪ್ರಕಟವಾಗುವ ವರೆಗೆ ಎಲ್ಲಾ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಮತ್ತು ಮೀಸಲಾತಿ ಅನ್ವಯವಾಗುವ ವೃಂದಗಳಿಗೆ ನೀಡಲಾಗುವ ಮುಂಬಡ್ತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಆಯೋಜಿಸಬಾರದೆಂದು ಸೂಚಿಸಿದೆ.

(ವಂದಿತಾ ಶರ್ಮಾ),
ಸರ್ಕಾರದ ಮುಖ್ಯ ಕಾರ್ಯದರ್ಶಿ

ಗೆ:
ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/
ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.

ಕೊಠಡಿ ಸಂಖ್ಯೆ: 320, 3ನೇ ಮಹಡಿ, ವಿಧಾನ ಸೌಧ, ಬೆಂಗಳೂರು - 560 001, ದೂರವಾಣಿ ಕಛೇರಿ: +91-80-22252442 / 22033300 ಫ್ಯಾಕ್ಸ್: +91-80-22258913
Room No. 320, 3rd Floor, Vidhana Soudha, Bengaluru - 560 001, Phone. off. +91-80-22252442 / 22033300 Fax: +91-80-22258913
E-mail : cs@karnataka.gov.in
Generated from eOffice by SOMA SHEKARA, CESC-AHR-ASST(SS), ASSISTANT, CHAMUNDESHWARI ELECTRICITY SUPPLY CORPORATION LIMITED MYSORE on 14/12/202

File No. CESC/AHR/AOTH/40/2022-AHRS (Computer No. 39200)
Annexure to Circular No: KPTCL/B16/5411/96-97 Dated 23.11.2022

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 240 ಸೇನೆನಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 18.11.2022

**ಸುತ್ತೋಲೆ**

ವಿಷಯ: ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ ಸೂಚನೆಗಳು.

ಉಲ್ಲೇಖ: 1. ದಿನಾಂಕ: 31.10.2022ರ ಅಧಿಸೂಚನೆ ಸಂಖ್ಯೆ: ಸಕಇ 84 ಎಸ್ ಟಿಪಿ 2021

2. ದಿನಾಂಕ:17.11.2022ರ ಟಿಪ್ಪಣಿ ಸಂಖ್ಯೆ: ಮುಕಾ/ 502089/ 2022.

*~*~*~*~*

ದಿನಾಂಕ: 31.10.2022ರ ಉಲ್ಲೇಖಿತ (1)ರಲ್ಲಿನ ಅಧಿಸೂಚನೆ ಸಂಖ್ಯೆ: ಸಕಇ 84 ಎಸ್ ಟಿಪಿ 2021ರನ್ವಯ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ 2022ರ ಉಪಬಂಧಗಳು ದಿನಾಂಕ: 01.11.2022ರಿಂದ ಜಾರಿಗೆ ಬರತಕ್ಕದ್ದೆಂದು ಗೊತ್ತುಪಡಿಸಲಾಗಿರುತ್ತದೆ.

ದಿನಾಂಕ: 17.11.2022ರ ಉಲ್ಲೇಖ (2)ರಲ್ಲಿನ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: ಮುಕಾ/ 502/ 089/2022ರಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಎಲ್ಲಾ ನೇರ ನೇಮಕಾತಿ ಮತ್ತು ಮೀಸಲಾತಿ ಅನ್ವಯವಾಗುವ ವೃಂದಗಳಿಗೆ ನೀಡಲಾಗುವ ಮುಂಬಡ್ತಿ ಪ್ರಕ್ರಿಯೆಗೆ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಆಯೋಜಿಸದಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ **ದಿನಾಂಕ: 01.11.2022ರ ಪೂರ್ವದಲ್ಲಿಯೇ** ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿದ್ದಲ್ಲಿ ಅಥವಾ ಆಯ್ಕೆ ಪ್ರಕ್ರಿಯೆ ಪ್ರಾರಂಭಗೊಂಡಿದ್ದಲ್ಲಿ ಅಂತಹ ನೇಮಕಾತಿಗಳನ್ನು ನೇರ ನೇಮಕಾತಿಗಾಗಿ ಹೊರಡಿಸಲಾಗಿದ್ದ ಅಧಿಸೂಚನೆಯನ್ವಯವೇ ಪೂರ್ಣಗೊಳಿಸುವಂತೆ ಹಾಗೂ ಮುಂಬಡ್ತಿ ನೀಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆ ನಡೆಸಿ ಮುಂಬಡ್ತಿ ಆದೇಶವನ್ನು ಹೊರಡಿಸಲು ಬಾಕಿ ಇರುವ ಪ್ರಕರಣಗಳನ್ನು ಆ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ತೀರ್ಮಾನದನ್ವಯ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ. ಮುಂದುವರೆದು, **ದಿನಾಂಕ: 01.11.2022ರಿಂದ ದಿನಾಂಕ: 17.11.2022ರ ಅವಧಿಯಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆ ನಡೆಸಿ ನೀಡಿರುವ ಎಲ್ಲಾ ಮುಂಬಡ್ತಿ ಆದೇಶಗಳನ್ನು ತಕ್ಷಣವೇ ಹಿಂಪಡೆಯಲು** ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

ಮೇಲ್ಕಂಡ ಸೂಚನೆಗಳು ಎಲ್ಲಾ ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ ನಿಗಮ/ ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನಪಡೆಯುವ ಸಂಸ್ಥೆಗಳಿಗೂ ಸಹ ಅನ್ವಯಿಸುತ್ತದೆ.

18-11-2022
(ವೀರಭದ್ರು)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಎ), ಕೊಠಡಿ [illegible] ಕಳುಹಿಸುವಂತೆ ಕೋರಲಾಗಿದೆ.